ಬೆಳೆ ವಿಮಾ ಯೋಜನೆ		
ಒಟ್ಟು:	9044.03	2024.15

ಕೇಂದ್ರ ಸರ್ಕಾರದಿಂದ ಸಮ ಪ್ರಮಾಣದಲ್ಲಿ ವಿಮಾ ಸಂಸ್ಥೆಗೆ ನೇರವಾಗಿ ಹಣ ಬಿಡುಗಡೆಯಾಗಿರುತ್ತದೆ.

ಈ) ವಿಮಾ ಯೋಜನೆಗೆ ತಾಲ್ಲೂಕಿನಿಂದ ಹೋಬಳಿಗೆ ಘಟಕವನ್ನಾಗಿ ಆಧರಿಸುವ ಚಿಂತನೆ ಸರ್ಕಾರದ ಮುಂದಿದೆಯೇ;

ರಾಷ್ಟ್ರೀಯ ಕೃಷಿ ವಿಮಾ ಯೋಜನೆ ಹಾಗೂ ಪ್ರಾಯೋಗಿಕ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಗಳಲ್ಲಿ ಈಗಾಗಲೇ ರಾಜ್ಯ ಸರ್ಕಾರವು ಹೋಬಳಿ ಘಟಕವನ್ನಾಗಿ ಆಧರಿಸಿ ಅಧಿಸೂಚನೆಗಳನ್ನು ಹೊರಡಿಸಿರುತ್ತದೆ.

ಉ) ಬೇರೆ ಬೇರೆ ರಾಜ್ಯಗಳಲ್ಲಿರುವ ಹಾಗೂ ರಾಜ್ಯದಲ್ಲಿರುವ ವಿಮಾ ಯೋಜನೆಗಳಿಗೆ ಇರುವ ವ್ಯತ್ಯಾಸವೇನು;

ಈ ಎರಡೂ ಯೋಜನೆಗಳು ಕೇಂದ್ರ ಸರ್ಕಾರದ ಯೋಜನೆಗಳಾಗಿದ್ದು, ನಮ್ಮ ರಾಜ್ಯದಲ್ಲಿ ಹಾಗೂ ಇತರೆ ರಾಜ್ಯಗಳಲ್ಲಿ ಅನುಷ್ಠಾನಗೊಳಿಸುವಲ್ಲಿ ಯಾವುದೇ ವ್ಯತ್ಯಾಸ ಇರುವುದಿಲ್ಲ.

ಊ) ಈ ವಿಮಾ ಯೋಜನೆಗಳಿಂದ ರೈತರು ಹೆಚ್ಚಿನ ಸಹಕಾರಿಯಾಗಲು ಯಾವುದಾದರೂ ಕಾರ್ಯಕ್ರಮ ರೂಪಿಸಲಾಗಿದೆಯೇ?

ಕೇಂದ್ರ ಸರ್ಕಾರವು ರಚಿಸಿರುವ ಮಾರ್ಗಸೂಚಿಯಂತೆ ಈ ಎರಡೂ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಹೆಚ್ಚಿನ ಸಂಖ್ಯೆಯಲ್ಲಿ ರೈತರು ಭಾಗವಹಿಸಲು ಅನುವಾಗುವಂತೆ ಹೆಚ್ಚಿನ ಪ್ರಚಾರ ಕಾರ್ಯ ಕೈಗೊಳ್ಳಲಾಗುತ್ತಿದೆ.

292 ಶ್ರೀ ಜಯಚಂದ್ರ ಟಿ.ಬಿ.
ತೋಟಗಾರಿಕೆ ಮತ್ತು ಬಂಧಿಖಾನೆ ಸಚಿವರು

1 ತುಮಕೂರು ಜಿಲ್ಲೆಯ ಶಿರಾ ಮತ್ತು ಅಕ್ಕಪಕ್ಕ ತಾಲ್ಲೂಕುಗಳಲ್ಲಿ ಪುಷ್ಪೋದ್ಯಮಕ್ಕೆ ಒತ್ತು ನೀಡಲು ಸ್ಥಾಪಿಸುತ್ತಿರುವ ಹೂವುಗಳ ಹರಾಜು ಕೇಂದ್ರಕ್ಕೆ ಇದುವರೆಗೂ ಬಿಡುಗಡೆ ಮಾಡಿದ ಹಣವೆಷ್ಟು?

ರೂ.200.00 ಲಕ್ಷಗಳು

2 ಹಾಗಿದ್ದಲ್ಲಿ ಹರಾಜು ಕೇಂದ್ರವನ್ನು ಯಾವಾಗ ಪ್ರಾರಂಭಿಸಲಾಗುವುದು?

ಈ ಉದ್ದೇಶಕ್ಕಾಗಿ ಕೃಷಿ ಇಲಾಖೆಯಿಂದ 2 ಎಕರೆ ಜಮೀನನ್ನು ಪಡೆಯಲಾಗಿದೆ. ಯೋಜನೆಯ ಅನುಷ್ಠಾನ ಹಾಗೂ ನಿರ್ವಹಣೆಗೆ ಸಲಹೆಗಾರರನ್ನು ನೇಮಿಸಿಕೊಳ್ಳಲಾಗಿದೆ. ಸಲಹೆಗಾರರು ಟೆಂಡರ್ ದಾಖಲಾತಿಗಳನ್ನು ಸಿದ್ಧಪಡಿಸುತ್ತಿದ್ದಾರೆ. ಕಾಮಗಾರಿಯ ಕೆಲಸವನ್ನು ಅತಿ ಶೀಘ್ರದಲ್ಲಿ

ಪ್ರಾರಂಭಿಸಲಾಗುವುದು. ಮೂಲಭೂತ ಸೌಕರ್ಯಗಳನ್ನು ಪೂರ್ಣಗೊಳಿಸಿ ಹರಾಜು ಕೇಂದ್ರವನ್ನು ಪ್ರಾರಂಭಿಸಲಾಗುವುದು.

ಅನುಬಂಧ–II

ಲೋಕೋಪಯೋಗಿ ಸಚಿವರು

ಅಭಿಯಾಚನೆ ಕ್ರಮಾಂಕ 20 – ಲೋಕೋಪಯೋಗಿ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2010 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಲೋಕೋಪಯೋಗಿ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 1,30,630.14 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 2,39,572.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

ಕೃಷಿ ಸಚಿವರು

ಅಭಿಯಾಚನೆ ಕ್ರಮಾಂಕ 01 – ಕೃಷಿ ಮತ್ತು ತೋಟಗಾರಿಕೆ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2010 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಕೃಷಿ ಮತ್ತು ತೋಟಗಾರಿಕೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 1,70,028.69 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 2,500.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

ಕಂದಾಯ ಸಚಿವರು

ಅಭಿಯಾಚನೆ ಕ್ರಮಾಂಕ 14 – ಕಂದಾಯ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2010 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಕಂದಾಯ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 2,13,623.08 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 10,020.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.